ರಾಜ್ಯದಲ್ಲಿ ಗುತ್ತಿಗೆ ಆಧಾರದ ಮೇಲೆ ವೈದ್ಯರ ನೇಮಕಾತಿ

2491(3007) ಶ್ರೀ ಅಪ್ಪಚ್ಚು ರಂಜನ್ (ಸೋಮವಾರಪೇಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಗುತ್ತಿಗೆ ಆಧಾರದ ಮೇಲೆ ಎಷ್ಟು ವೈದ್ಯರನ್ನು ನೇಮಕ ಮಾಡಲಾಗಿದೆ; ರಾಜ್ಯದಲ್ಲಿ ಎಷ್ಟು ವೈದ್ಯರ ಹುದ್ದೆ ಖಾಲಿ ಇವೆ, ಕೊಡಗು ಜಿಲ್ಲೆಯಲ್ಲಿ ಎಷ್ಟು ಹುದ್ದೆ ಖಾಲಿ ಇದೆ? (ತಾಲ್ಲೂಕುವಾರು ವಿವರ ನೀಡುವುದು)

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ವೈದ್ಯರ ಸಂಖ್ಯೆ	-	12253
ಖಾಲಿ ಇರುವ ವೈದ್ಯರ ಹುದ್ದೆಗಳು	-	608
ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ವಿವರ (ತಾಲ್ಲೂಕುವಾರು ವಿವರ)		
ವಿರಾಜಪೇಟೆ	-	18
ಸೋಮವಾರಪೇಟೆ	-	12
ಮಡಕೇರಿ	-	23

ಸೋಮವಾರಪೇಟೆ ಆಲೂರು ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿನ ಉಪನ್ಯಾಸಕರ ಹುದ್ದೆಗಳ ಭರ್ತಿ

2493(3348) ಶ್ರೀ ಅಪ್ಪಚ್ಚು ರಂಜನ್ (ಸೋಮವಾರಪೇಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸೋಮವಾರ ಪೇಟೆ ತಾಲ್ಲೂಕು ಆಲೂರ ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಆ) ಈ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು? ಉಪನ್ಯಾಸಕರ ಹುದ್ದೆ ಖಾಲಿ ಇರುವುದರಿಂದ ಫಲಿತಾಂಶದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ), ಆ) ಸದರಿ ಕಾಲೇಜಿಗೆ ಒಂದು ಪ್ರಾಚಾರ್ಯರ ಹುದ್ದೆ, 6 ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುತ್ತದೆ.

ಸದರಿ ಕಾಲೇಜಿನಲ್ಲಿ ಸಮಾಜಶಾಸ್ತ್ರ ಉಪನ್ಯಾಸಕರ 2 ಹುದ್ದೆಗಳು ಖಾಲಿ ಇರುತ್ತದೆ. ಈ ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಭರ್ತಿ ಮಾಡಲಾಗುವುದು. ಅದಾಗ್ಯೂ ಸದರಿ ಉಪನ್ಯಾಸಕರ ಕೊರತೆಯನ್ನು ನೀಗಿಸಲು ಸರ್ಕಾರಿ ಪದವಿ ಪೂರ್ವ ಕಾಲೇಜು, ಐಗೂರಿನಿಂದ ಸಮಾಜ ಶಾಸ್ತ್ರ ಉಪನ್ಯಾಸಕರನ್ನೂ ಮತ್ತು ಸರ್ಕಾರಿ ಪದವಿಪೂರ್ವ ಕಾಲೇಜು ಶಿರಂಗಾಲದಿಂದ ರಾಜ್ಯ ಶಾಸ್ತ್ರ ಉಪನ್ಯಾಸಕರನ್ನು ವಾರಕ್ಕೆ 3 ದಿನಗಳಿಗೆ ನಿಯೋಜನೆ ಮೇರೆಗೆ ನೇಮಿಸಿ ವಿದ್ಯಾರ್ಥಿಗಳಿಗೆ ಉಪನ್ಯಾಸಕರ ಕೊರತೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ.

ತೀರ್ಥಹಳ್ಳಿ ತಾಲ್ಲೂಕಿನ ಆರಗದಲ್ಲಿ ಜೂನಿಯರ್ ಕಾಲೇಜನ್ನು ಪ್ರಾರಂಭಿಸುವುದು.

2495(2943) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1) ರಾಜ್ಯದಲ್ಲಿ ಇತ್ತೀಚೆಗೆ ಎಷ್ಟು ಸರ್ಕಾರಿ ಜೂನಿಯರ್ ಕಾಲೇಜುಗಳನ್ನು ಮುಚ್ಚಲಾಗಿದೆ, ಇವುಗಳನ್ನು ಎಲ್ಲೆಲ್ಲಿಗೆ ಸ್ಥಳಾಂತರಿಸಲಾಗಿದೆ; (ಕಾಲೇಜುವಾರು ವಿವರ ನೀಡುವುದು)

2) ತೀರ್ಥಹಳ್ಳಿ ಸರ್ಕಾರಿ ಜೂನಿಯರ್ ಕಾಲೇಜಿಗೆ ಪ್ರವೇಶ ಬಯಸಿಬಂದ ಅರ್ಜಿಗಳೆಷ್ಟು; ಎಲ್ಲಾ ವಿದ್ಯಾರ್ಥಿಗಳಿಗೆ ಪ್ರವೇಶ ಕೊಟ್ಟರೆ ಕೊಠಡಿಗಳ ಸಂಖ್ಯೆ ಮತ್ತು ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

3) ತೀರ್ಥಹಳ್ಳಿಯಲ್ಲಿ ಜೂನಿಯರ್ ಕಾಲೇಜಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳಿದ್ದು (ಪ್ರವೇಶ ಬಯಸಿರುವವರು) ಇದೇ ತಾಲ್ಲೂಕಿನ ಆಗರದಲ್ಲಿ ಒಂದು ಜೂನಿಯರ್ ಕಾಲೇಜು ತೆರೆಯಲು ಸರ್ಕಾರಕ್ಕೆ ಮನವಿ ಏನಾದರೂ ಬಂದಿದೆಯೇ ಈ ಬಗ್ಗೆ ಸರ್ಕಾರದ ನೀಲುವೇನು?

ಶ್ರೀ ಹೆಚ್. ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

1) ರಾಜ್ಯದಲ್ಲಿ ಪ್ರಸಕ್ತ ವರ್ಷ 16 ಕಾಲೇಜುಗಳನ್ನು ಮುಚ್ಚಲಾಗಿದೆ. ಇವುಗಳನ್ನು ಸ್ಥಳಾಂತರಿಸಿರುವ ವಿವರ ಲಗತ್ತಿಸಿದೆ.